ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಮೇ 6, 2020**

## ಪತ್ರಿಕಾ ಪ್ರಕಟಣೆ

## ಕೋವಿಡ್ 19 ಪರಿಹಾರ ಘೋಷಣೆಗಳು

**ಬೆಂಗಳೂರು, ಮೇ 6 ( ಕರ್ನಾಟಕ ವಾರ್ತೆ ) :**

ಕಳೆದ ಒಂದೂವರೆ ತಿಂಗಳಿನಿಂದ ಲಾಕ್ ಡೌನ್ ನ ಪರಿಣಾಮವಾಗಿ ವಿವಿಧ ನಿರ್ಬಂಧಗಳನ್ನು ಹೇರಿರುವುದರಿಂದ ಎಲ್ಲ ವರ್ಗದ ಜನರು ಆರ್ಥಿಕವಾಗಿ ಸಂಕಷ್ಟವನ್ನು ಅನುಭವಿಸುತ್ತಾರೆ.

ಲಾಕ್ ಡೌನ್ ನಿಂದಾಗಿ ಎಲ್ಲ ದೇವಾಲಯಗಳು ಮುಚ್ಚಿರುವುದರಿಂದ ಹಬ್ಬ ಮದುವೆ, ಸಭೆ-ಸಮಾರಂಭಗಳು ಹಾಗೂ ಮತ್ತಿತರ ಯಾವುದೇ ಕಾರ್ಯಕ್ರಮಗಳು ನಡೆಯದಿರುವುದರಿಂದ ಹೂವುಗಳ ಬೇಡಿಕೆ ಇಲ್ಲದೇ ಹೂವು ಬೆಳೆಗಾರರು ತಾವು ಬೆಳೆದಿರುವ ಎಲ್ಲ ಹೂವುಗಳನ್ನು ತಮ್ಮ ಹೊಲದಲ್ಲೇ ನಾಶ ಮಾಡುವ ಪರಿಸ್ಥಿತಿ ಉದ್ಭವಿಸಿದೆ. ಒಟ್ಟಾರೆ **11687** ಹೆಕ್ಟೇರ್ ವಿಸ್ತೀರ್ಣದಲ್ಲಿ ಬೆಳೆದಿರುವ ಹೂವುಗಳು ಮಾರಾಟವಾಗದೆ ರೈತರಿಗೆ ನಷ್ಟವಾಗಿದೆ. ಇದರಿಂದ ಎಲ್ಲ ರೀತಿಯ ಹೂವುಗಳು ಬೆಳೆದಿರುವ ರೈತರಿಗೆ ನೆರವಾಗಲು ನಮ್ಮ ಸರ್ಕಾರವು ಹೆಕ್ಟೇರ್ ಗೆ ಗರಿಷ್ಠ **25,000/-** ರೂ.ಗಳಂತೆ ಪರಿಹಾರವನ್ನು ಘೋಷಿಸುತ್ತದೆ.

ಈ ವರ್ಷ ರಾಜ್ಯದಲ್ಲಿ ತರಕಾರಿ ಮತ್ತು ಹಣ್ಣುಗಳು ಇಳುವರಿಯು ಉತ್ತಮವಾಗಿರುತ್ತದೆ. ಆದರೆ ಕೋವಿಡ್ – 19 ರಿಂದ ಆಗಿರುವ ರಾಷ್ಟ್ರಾದ್ಯಂತ ಲಾಕ್ ಡೌನ್ ನಿಂದಾಗಿ ರೈತರು ತಮ್ಮ ಬೆಳೆಗಳಿಗೆ ಸೂಕ್ತ ದರಗಳನ್ನು ಪಡೆಯಲು ಸಾಧ್ಯವಾಗಿರುವುದಿಲ್ಲ. ನಷ್ಟಕ್ಕೆ ಒಳಗಾಗಿರುವ ತರಕಾರಿ ಹಾಗೂ ಹಣ್ಣು ಬೆಳೆಗಾರರಿಗೆ ಸೂಕ್ತ ಪರಿಹಾರ ನೀಡುವ ಬಗ್ಗೆ ಪ್ಯಾಕೇಜ್ ಅನ್ನು ಘೋಷಣೆ ಮಾಡಲಾಗುವುದು.

ಕೋವಿಡ್ 19 ರಿಂದಾಗಿ ರೈತರಷ್ಟೇ ಅಲ್ಲದೆ ಅಲ್ಲದೆ ಪಟ್ಟಣದ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಅಗಸರ ಹಾಗೂ ಕ್ಷೌರಿಕರ ವೃತ್ತಿಯಲ್ಲಿ ತೊಡಗಿರುವವರು ಒಂದೂವರೆ ತಿಂಗಳಿಗೆ ಮೇಲ್ಪಟ್ಟು ತಮ್ಮ ಕಸುಬನ್ನು ನಡೆಸಲಾಗಿದೇ ತಮ್ಮ ದೈನಂದಿನ ಆದಾಯವನ್ನು ಕಳೆದುಕೊಂಡಿರುತ್ತಾರೆ. ಇವರಿಗೆ ನೆರವಾಗಲು ನಮ್ಮ ರಾಜ್ಯದಲ್ಲಿರುವ ಅಂದಾಜು 60,000 ಅಗಸರ ವೃತ್ತಿಯಲ್ಲಿ ಇರುವ ಹಾಗೂ 230000 ಕ್ಷೌರಿಕ ವೃತ್ತಿಯಲ್ಲಿ ಇರುವವರಿಗೆ 5000/- ರೂ.ಗಳನ್ನು ಒಂದು ಬಾರಿ ಪರಿಹಾರವಾಗಿ ನೀಡಲಾಗುವುದು.

ಹಾಗೆಯೇ ಆಟೋರಿಕ್ಷಾ ಹಾಗೂ ಟ್ಯಾಕ್ಸಿ ಚಾಲಕರು ತಮ್ಮ ದೈನಂದಿನ ಉದ್ಯೋಗವನ್ನು ನಡೆಸಲಾಗಿದೇ ತಮ್ಮ ಆದಾಯವನ್ನು ಕಳೆದುಕೊಂಡಿರುತ್ತಾರೆ. ನಮ್ಮ ರಾಜ್ಯದಲ್ಲಿ ಇರುವ ಇಂತಹ 7,75,000 ಚಾಲಕರಿಗೆ ಒಂದು ಬಾರಿ ಪರಿಹಾರವಾಗಿ 5000 ರೂಗಳನ್ನು ನೀಡಲಾಗಿದೆ.

ಅತಿಸಣ್ಣ, ಸಣ್ಣ ಹಾಗೂ ಮಧ್ಯಮ ಉದ್ದಿಮೆಗಳನ್ನು ನಡೆಸುವ ಉದ್ದಿಮೆದಾರರು ತಮ್ಮ ಉದ್ದಿಮೆಗಳನ್ನು ತೆರೆಯಲಾಗಿದೆ ಹಾಗೂ ತಮ್ಮ ಉತ್ಪನ್ನಗಳನ್ನು ಸಾಗಿಸಿ ಮಾರಾಟ ಮಾಡಲಾಗದೆ ನಷ್ಟವನ್ನು ಅನುಭವಿಸಿದ್ದಾರೆ. ಹಾಗೆಯೇ ಮುಂದಿನ ದಿನಗಳಲ್ಲಿ ವಹಿವಾಟು ಚೇತರಿಕೆಯಾಗಲು ಕೆಲವು ತಿಂಗಳ ಸಮಯ ಬೇಕಾಗಿರುವುದರಿಂದ ಇವರಿಗೆ ಸರಕಾರ ನೆರವು ನೀಡುವುದು ಅನಿವಾರ್ಯವಾಗಿದೆ. ಆದ್ದರಿಂದ  ಅತಿಸಣ್ಣ, ಸಣ್ಣ ಹಾಗೂ ಉದ್ಯಮ ಉದ್ದಿಮೆಗಳ ವಿದ್ಯುತ್ ಬಿಲ್ಲಿನ ಫಿಕ್ಸ್ಡ್ ಚಾರ್ಜ್‌ನ್ನು ಎರಡು ತಿಂಗಳ ಅವಧಿಗೆ ಪೂರ್ತಿಯಾಗಿ ಮನ್ನಾ ಮಾಡಲಾಗುವುದು.

ಹಾಗೆಯೇ ಬೃಹತ್ ಕೈಗಾರಿಕೆಗಳಿಗೆ ಅವರು ವಿದ್ಯುತ್ ಇಲ್ಲಿನ ಫಿಕ್ಸ್ಡ್ ಚಾರ್ಜ್ ನ ಪಾವತಿಯನ್ನು ಎರಡು ತಿಂಗಳ ಅವಧಿಗೆ ಯಾವುದೇ ಬಡ್ಡಿ ಅಥವಾ ದಂಡ ಇಲ್ಲದೇ ಬಡ್ಡಿ ರಹಿತವಾಗಿ ಮುಂದೂಡಲಾಗುವುದು.  ಎಲ್ಲ ಪ್ರವರ್ಗದ ಗ್ರಾಹಕರುಗಳಿಗೆ ವಿದ್ಯ್ ಚ್ಚಕ್ತಿ  ಮೊತ್ತವನ್ನು ಪಾವತಿಸಲು ಈ ಕೆಳಕಂಡ ಸವಲತ್ತು / ಪರಿಹಾರಗಳನ್ನು ಒದಗಿಸುವುದು.
ನಿಗದಿತ ಸಮಯದೊಳಗೆ ವಿದ್ಯುತ್ ಬಿಲ್ಲಿನ ಮೊತ್ತವನ್ನು ಪಾವತಿಸುವ ಗ್ರಾಹಕರಿಗೆ ಪ್ರೋತ್ಸಾಹ ರಿಯಾಯಿತಿಯನ್ನು ನೀಡುವುದು.

ವಿಳಂಬ ಪಾವತಿಗಾಗಿ ವಿದ್ಯುತ್ ಬಿಲ್ಲಿನ ಮೊತ್ತದ ಮೇಲೆ ವಿಧಿಸುವ ಬಡ್ಡಿಯನ್ನು ಕಡಿಮೆಗೊಳಿಸಲಾಗುವುದು. ವಿದ್ಯುತ್ ಬಿಲ್ಲಿನ ಮೊತ್ತವನ್ನು ಪಾವತಿಸುವ ಗ್ರಾಹಕರಿಗೆ ಪ್ರೋತ್ಸಾಹಧನ ನೀಡಲಾಗುವುದು. ಕಂದಾಯ ಬಾಕಿ ಮೊತ್ತವನ್ನು ಕಂತುಗಳಲ್ಲಿ/ಭಾಗವಾಗಿ ಪಾವತಿಸಲು ಅವಕಾಶ ಕಲ್ಪಿಸಲಾಗುವುದು. ಕಂದಾಯ ಬಾಕಿ ಮೊತ್ತವನ್ನು ಪಾವತಿಸದಿರುವ ಗ್ರಾಹಕರಿಗೆ 30.06.2020 ರವರೆಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸದೇ ಇರುವುದು.

ಈಗಾಗಲೇ ಸಾಕಷ್ಟು ಸಂಕಷ್ಟಗಳನ್ನು ಎದುರಿಸುತ್ತಿದ್ದು ನೇಕಾರರಿಗೆ ಈ ಲಾಕ್ ಡೌನ್ ನಿಂದಾಗಿ ಮತ್ತಷ್ಟು ನಷ್ಟ ಉಂಟಾಗಿದೆ ನನ್ನ ಸರ್ಕಾರವು ಈಗಾಗಲೇ ನೇಕಾರರಿಗೆ ನೆರವಾಗಲು 109 ಕೋಟಿ ರೂ.ಗಳ ವೆಚ್ಚದಲ್ಲಿ "ನೇಕಾರರ ಸಾಲ ಮನ್ನಾ ಯೋಜನೆ"ಯನ್ನು ಘೋಷಿಸಿದೆ. ಈ ಯೋಜನೆಗೆ ಈಗಾಗಲೇ ಹಿಂದಿನ ವರ್ಷ 29 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ. ಉಳಿದಿರುವ 80 ಕೋಟಿ ರೂ.ಗಳನ್ನು ಕೂಡಲೇ ಬಿಡುಗಡೆ ಮಾಡಿ ನೇಕಾರರಿಗೆ ಹೊಸ ಸಾಲಗಳು ದೊರಕಿಸಿಕೊಡಲು ನಾನು ಮಾಡಿಕೊಡಲಾಗುತ್ತದೆ. ಮುಂದುವರೆದು ಜನವರಿ 01 2019 ರಿಂದ ಮಾರ್ಚ್

31, 2019 ರ ಅವಧಿಯೊಳಗೆ 1 ಲಕ್ಷ ರೂ. ಒಳಗಿನ ತಮ್ಮ ಸಾಲವನ್ನು ಮರುಪಾವತಿಸಿರುವ ನೇಕಾರರಿಗೂ ಸಹ ಅವರು ಪಾವತಿಸಿರುವ ಮೊತ್ತವನ್ನು ಮರುಪಾವತಿ ಮಾಡುವ ಮೂಲಕ ಯೋಜನೆಯ ಸೌಲಭ್ಯವನ್ನು ಒದಗಿಸಲಾಗುವುದು. ಇದಲ್ಲದೆ "ನೇಕಾರರ ಸಮ್ಮಾನ್ ಯೋಜನೆ" ಎಂಬ ಹೊಸ ಯೋಜನೆಯನ್ನು ಘೋಷಿಸಲು ಇಚ್ಛಿಸುತ್ತೇನೆ. ಈ ಯೋಜನೆಯಡಿಯಲ್ಲಿ ನಮ್ಮ ರಾಜ್ಯದಲ್ಲಿರುವ ಅಂದಾಜು 54,000 ಕೈಮಗ್ಗ ನೇಕಾರರಿಗೆ ಪ್ರತಿ ವರ್ಷ 2000/- ರೂ.ಗಳಂತೆ ಅವರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು.

ರಾಜ್ಯದಲ್ಲಿರುವ 15.80 ಲಕ್ಷ ನೋಂದಾಯಿತ ಕಟ್ಟಡ ಕಾರ್ಮಿಕರ ಪೈಕಿ ಈಗಾಗಲೇ 11.80 ಲಕ್ಷ ಕಟ್ಟಡ ಕಾರ್ಮಿಕರಿಗೆ ಸರ್ಕಾರದಿಂದ 2000 ರೂ.ಗಳನ್ನು ಅವರ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾಯಿಸಲಾಗಿರುತ್ತದೆ. ಇನ್ನುಳಿದ 4 ಲಕ್ಷ ಕಟ್ಟಡ ಕಾರ್ಮಿಕರಿಗೆ ಅವರವರ ಬ್ಯಾಂಕ್ ಖಾತೆಯ ವಿವರಗಳು ದೊರೆತ ನಂತರ 2,000 ರೂ.ಗಳನ್ನು ವರ್ಗಾಯಿಸಲು ಕ್ರಮ ಕ್ರಮವಹಿಸಲಾಗುವುದು. ಮುಂದುವರೆದು ಈ ಎಲ್ಲ ಕಟ್ಟಡ ಕಾರ್ಮಿಕರಿಗೆ ಈಗಾಗಲೇ ನೀಡಿರುವ 2,000 ರೂ.ಗಳ ಜೊತೆಗೆ ಹೆಚ್ಚುವರಿಯಾಗಿ 3,000 ರೂ.ಗಳನ್ನು ನೀಡಲು ಸರ್ಕಾರ ನಿರ್ಧರಿಸಿದೆ. ಈ ಹಣವನ್ನು ಅವರ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾಯಿಸಲಾಗುವುದು. ಮೇಲ್ಕಂಡ ಎಲ್ಲ ಪರಿಹಾರ ಸೌಲಭ್ಯಗಳನ್ನು ಅಂದಾಜು ರೂ. 1610 ಕೋಟಿಗಳ ವೆಚ್ಚದಲ್ಲಿ ಮಾಡಲಾಗುವುದು.

## ಹಸಿರುವಲಯಗಳಲ್ಲಿ ಪ್ರತಿದಿನ ಶೇ. 50 ರಷ್ಟು ಅಭ್ಯರ್ಥಿಗಳಿಗೆ ಮಾತ್ರ ಡಿ.ಎಲ್. ಟೆಸ್ಟ್

ಬೆಂಗಳೂರು, ಮೇ 6 ( ಕರ್ನಾಟಕ ವಾರ್ತೆ ) :

ಕೇಂದ್ರ ಗೃಹ ಮಂತ್ರಾಲಯದಿಂದ ಲಾಕ್‌ಡೌನ್ ಕ್ರಮಗಳ ಕುರಿತು ಹೊಸ ಮಾರ್ಗಸೂಚಿಗಳು ಮತ್ತು ರಾಜ್ಯ ಸರ್ಕಾರವು ಆದೇಶದಂತೆ ಸಾರಿಗೆ ಇಲಾಖೆ ಮೇ 5ರಿಂದ ಹಸಿರು ವಲಯಕ್ಕೊಳಪಡುವ 14 ಜಿಲ್ಲೆಗಳ ಸಾರಿಗೆ ಕಚೇರಿಗಳು ಕಾರ್ಯನಿರ್ವಹಿಸುತ್ತಿವೆ. ವಾಹನ ನೋಂದಣಿಗೆ, ಚಾಲನಾ ಅನುಜ್ಞಾಪತ್ರ ನೀಡುವಿಕೆ, ವಾಹನಗಳ ಅರ್ಹತಾ ಪತ್ರ ನೀಡುವಿಕೆ, ತೆರಿಗೆ ಸ್ವೀಕೃತಿ ಮುಂತಾದವುಗಳನ್ನು ಪುನರಾಂಭಿಸಲಾಗುತ್ತಿದೆ.

ಸಾರ್ವಜನಿಕರು ಸಾರಿಗೆ ಕಚೇರಿಗಳಲ್ಲಿ ಕೋವಿಡ್ –19 ರ ಮಾರ್ಗಸೂಚಿಗಳನ್ನು ಪಾಲಿಸಿ, ಸೋಂಕು ತಡೆಗಟ್ಟುವ ನಿಟ್ಟಿನಲ್ಲಿ ಸಾಮಾಜಿಕ ಅಂತರ ಕಾಪಾಡುವುದು, ಮಾಸ್ಕ್ ಧರಿಸುವುದು, ಸ್ಯಾನಿಟೈಸರ್ ಬಳಕೆ, ಥರ್ಮಲ್ ಸ್ಕ್ರೀನಿಂಗ್ ಒಳಪಡುವುದು ಇತ್ಯಾದಿ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಿ ಮೇಲಿನ ಸೇವೆಗಳನ್ನು ಪಡೆಯಬಹುದಗಿದೆ. ಈ 14 ಜಿಲ್ಲೆಗಳ ಪ್ರಾದೇಶಿಕ ಸಾರಿಗೆ ಕಚೇರಿಗಳಲ್ಲಿ, ಡಿ.ಎಲ್. ಮತ್ತು ಕಲಿಕಾ ಲೈಸೆನ್ಸ್ ಟೆಸ್ಟ್‌ಗಾಗಿ ಈಗಾಗಲೇ ಆನ್‌ಲೈನ್‌ನಲ್ಲಿ ನೋಂದಾಯಿಸಿ ಕಾಯುತ್ತಿರುವ ಅಭ್ಯರ್ಥಿಗಳು ಆದ್ಯತೆಯ ಮೇರೆಗೆ ಪ್ರತಿದಿನ ಕೇವಲ ಶೇ. 50 ರಷ್ಟು ಮಾತ್ರ ಅವಕಾಶ ಮಾಡಿಕೊಡಲಾಗಿದೆ.ಸ 7–5–2020 ರಿಂದ ಇವುಗಳ ಟೆಸ್ಟ್

ಪ್ರಾರಂಭವಾಗಲಿದ್ದು, ನಿಗದಿತ ಟೆಸ್ಟ್ ನಡೆಸುವ ದಿನಾಂಕಗಳ ಸಂದೇಶಗಳನ್ನು ಅಭ್ಯರ್ಥಿಗಳ ಮೊಬೈಲ್‌ಗಳಿಗೆ ಕಳುಹಿಸಲಾಗಿದೆ.

ಹಸಿರು ವಲಯದ 14 ಜಿಲ್ಲೆಗಳಲ್ಲಿ ಇದರ ಸದುಪಯೋಗ ಪಡೆಯಲು ಕೋರಲಾಗಿದೆ. ಕೆಂಪು ಮತ್ತು ಕಿತ್ತಳೆ ವಲಯಗಳಲ್ಲಿನ ಸಾರಿಗೆ ಕಚೇರಿಗಳಲ್ಲಿ ವಾಹನ್ –4 ತಂತ್ರಾಂಶದ ಅಡಿಯಲ್ಲಿ ವಾಹನಗಳ ನೋಂದಣಿ, ವಾಹನದ ವರ್ಗಾವಣೆ, ಅರ್ಹತಾ ಪತ್ರ ನವೀಕರಣ ಇನ್ನಿತರ ಕೆಲಸಗಳನ್ನು ಪೂರೈಸಲಾಗುತ್ತಿದೆ. ಸದರಿ ಕಚೇರಿಗಳಲ್ಲಿ ಲೈಸೆನ್ಸ್‌ಗೆ ಸಂಬಂಧಿಸಿದ ಸೇವೆಗಳ ಲಭ್ಯತೆ ಇರುವುದಿಲ್ಲವೆಂದು ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಬೆಂಗಳೂರು ಇವರ ಪ್ರಕಟಣೆ ತಿಳಿಸಿದೆ.

## ಅವಧಿ ವಿಸ್ತರಣೆ

**ಬೆಂಗಳೂರು, ಮೇ 6 ( ಕರ್ನಾಟಕ ವಾರ್ತೆ ) :**

ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ ಜನವರಿ 2019 ಅವಧಿಯಲ್ಲಿ ಕನ್ನಡದಲ್ಲಿ ಪ್ರಕಟವಾದ ಕೃತಿಗಳಿಗೆ, ಅವುಗಳ ಮುದ್ರಣ, ಮುಖಪುಟ, ವಿನ್ಯಾಸ, ಗುಣಮಟ್ಟವನ್ನು ಪರಿಗಣಿಸಿ ವಿವಿಧ ಬಹುಮಾನಗಳಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಕೋವಿಡ್–19 ಹಿನ್ನೆಲೆಯಲ್ಲಿ ಅವಧಿಯನ್ನು ಮೇ 30 ರವರೆಗೆ ವಿಸ್ತರಿಸಲಾಗಿದೆ.

ಆಸಕ್ತ ಪ್ರಕಾಶಕರು/ಮುದ್ರಕರು/ಕಲಾವಿದರು/ಲೇಖಕರು ಸ್ವಯಂ ಅರ್ಜಿ ಸಲ್ಲಿಸಬಹುದಾಗಿದೆ. ಪುಸ್ತಕದ ಹೆಸರು ಲೇಖಕರ ಹೆಸರು, ಪ್ರಕಟವಾದ ವರ್ಷ, ಪ್ರಕಾಶಕರ ಹೆಸರು, ಮುದ್ರಣಾಲಯದ ಹೆಸರು ಮುಖಪುಟ ಚಿತ್ರ ರಚನೆಯ ಕಲಾವಿದರ ಹೆಸರು/ಚಿತ್ರ ಕಲಾವಿದರ ಪೂರ್ಣ ವಿಳಾಸ, ಈ ಎಲ್ಲಾ ವಿವರಗಳೊಂದಿಗೆ ಪುಸ್ತಕದ ಎರಡು ಪ್ರತಿಗಳನ್ನು ದಿನಾಂಕ 30–05–2020 ರೊಳಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು –2 ಇಲ್ಲಿಗೆ ಕಳುಹಿಸಿಕೊಡಬಹುದು.

ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಮೊದಲನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು 2 ವೆಬ್‌ಸೈಟ್ **www.kannadapustakapradhikara.com** ದೂರವಾಣಿ ಸಂಖ್ಯೆ 080–22484516 / 22107704 ಇಲ್ಲಿ ಸಂಪರ್ಕಿಸಬಹುದಾಗಿದೆ.

## Only 50% of the candidates Can avail DL Test per day

**Bengaluru, May 6 (Karnataka Information)**

**The new Guidelines of Ministry of Home Affairs, New Delhi and also the circular instructions issued by the State Government pertaining to the functioning of essential departments from 04th May 2020 and in this regard, the Transport Department hereby issues the directions to all the RTO offices in the state for delivering the services to the public.**

**The Transport Offices of the 14 Green Zone Districts in the State will be functioning and transport related services like Vehicle Registration, Issue of Driving Licence, Issue of Vehicle Fitness Certificate, Tax payment, etc will be carried out. While availing these services publics should follow the guidelines issued by the Central and State Government to contain the spread of Covid-19 like Social distancing, Thermal Screening, using of Sanitizer, wearing of Mask, etc in the RTO offices during their stay. The applicants who have already booked the LL and DL slots using online facility and waiting for test, can now appear for test on the re-schedule slots and this slot date and batch will be intimated to the applicants mobile and these tests will start from 07/05/2020.The applicants are requested to make use of this facility in their jurisdictional offices.**

**With regard to Orange and Red zone districts RTO's services like Vehicle Registration, Transfer of Ownership, Renewal of Fitness Certificate, etc are allowed in Vahan-4 software for public. But Learner/Driving Licence related services will not be available for public until further orders says Commissioner for Transport and Road Safety, Bengaluru.**

# ಅನಿವಾಸಿ ಕನ್ನಡಿಗರ ಕಷ್ಟಗಳಿಗೆ ಸ್ಪಂದಿಸಿದ ಪ್ರವಾಸೋದ್ಯಮ ಸಚಿವರು

ಬೆಂಗಳೂರು, ಮೇ 6 ( ಕರ್ನಾಟಕ ವಾರ್ತೆ ) :

ಸಾಗರೋತ್ತರ ದೇಶಗಳಲ್ಲಿ ನೆಲೆಸಿ ಬದುಕನ್ನು ಕಟ್ಟಿಕೊಂಡಿರುವ ಅನಿವಾಸಿ ಕನ್ನಡಿಗರು ಕೊರೊನಾ ಸಾಂಕ್ರಾಮಿಕ ರೋಗದಿಂದ ಸಂಕಷ್ಟಕ್ಕೆ ಸಿಲುಕಿದ್ದು, ಸಂಕಷ್ಟದಲ್ಲಿರುವ ಅನಿವಾಸಿ ಕನ್ನಡಿಗರ ಸಮಸ್ಯೆಗಳನ್ನು ಆಲಿಸುವ ದೃಷ್ಟಿಯಿಂದ ಮೇ.02.05.2020ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 3.00 ಗಂಟೆಯವರೆಗೆ ಅನಿವಾಸಿ ಕನ್ನಡಿಗರೊಂದಿಗೆ ಆನ್‌ಲೈನ್ ವಿಡಿಯೋ ಸಂವಾದ ಕಾರ್ಯಕ್ರಮವನ್ನು ಪ್ರವಾಸೋದ್ಯಮ ಸಚಿವ ಸಿ.ಟಿ. ರವಿ (ಗೃಹ ಕ್ವಾರೆಂಟೈನ್‌ನಿಂದ) ಮತ್ತು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷಕ ಟಿ.ಎಸ್.ನಾಗಭರಣರವರು ನಡೆಸಿದ್ದಾರೆ.

ಈ ಸಂವಾದ ಕಾರ್ಯಕ್ರಮದಲ್ಲಿ 34 ದೇಶಗಳಲ್ಲಿನ 55 ಪ್ರತಿನಿಧಿಗಳು ಹಾಗೂ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿ ಕೋವಿಡ್-19 ಹಿನ್ನಲೆಯಲ್ಲಿ ಆ ದೇಶದಲ್ಲಿನ ಪರಿಸ್ಥಿತಿಯನ್ನು ಹಂಚಿಕೊಂಡಿದ್ದು ಕೋವಿಡ್-19ರ ಪರಿಣಾಮದಿಂದ ಸಂಕಷ್ಟದಲ್ಲಿರುವವರ ನೆರವಿಗೆ ವಿದೇಶದಲ್ಲಿರುವ ಅಕ್ಷಯ ಪಾತ್ರೆ ಮತ್ತಿತರ ಕನ್ನಡಪರ ಸಂಘಟನೆಗಳು ಆಹಾರಕಿಟ್ ವಿತರಣೆಯಿಂದ ಹಿಡಿದು, ಪ್ರಧಾನ ಮಂತ್ರಿ/ ಮುಖ್ಯಮಂತ್ರಿಗಳ ಪರಿಹಾರ ನಿಧಿಗೂ ಸಹಾ ಸಹಾಯ ಮಾಡಿರುವುದನ್ನು ಸದರಿ ಸಂವಾದದಲ್ಲಿ ಸ್ಮರಿಸಿರುತ್ತಾರೆ. ವಿದೇಶದಲ್ಲಿ ಬದುಕನ್ನು ಕಟ್ಟಿಕೊಳ್ಳಲು ಹೋಗಿ ಸಂಕಷ್ಟಕ್ಕೆ ಸಿಲುಕಿರುವವರು ಪ್ರಮುಖವಾಗಿ ಈ ಕೆಳಕಂಡ ವಿಷಯಗಳನ್ನು ಪ್ರಸ್ತಾಪಿಸಿರುತ್ತಾರೆ.

1. ವಿಶ್ವದ ಬೇರೆ ಬೇರೆ ದೇಶಗಳಲ್ಲಿ ನೆಲೆಸಿರುವ ಕನ್ನಡಿಗರು ಅದರಲ್ಲೂ ನಿರ್ದಿಷ್ಟವಾಗಿ ಕೊಲ್ಲಿ ರಾಷ್ಟ್ರಗಳಲ್ಲಿ ನೆಲೆಸಿರುವ ಬಹುತೇಕ ಬಡ ಕೂಲಿ ಕಾರ್ಮಿಕರು ಯು.ಎ.ಇ, ಸೌದಿ ಅರೇಬಿಯಾ, ಕುವೈತ್, ಓಮನ್, ಬಹರೈನ್ ಮತ್ತು ಖತಾರ್ ದೇಶಗಳಲ್ಲಿ ಕಟ್ಟಡ ನಿರ್ಮಾಣ, ಧಾರ್ಮಿಕ ಕೇಂದ್ರಗಳು, ಆಸ್ಪತ್ರೆಗಳು, ವಾಣಿಜ್ಯ ಸಂಸ್ಥೆಗಳಲ್ಲಿ ಬಹು ಸಂಖ್ಯೆಯಲ್ಲಿ ಕೆಲಸ ಮಾಡುತ್ತಿದ್ದು, ಕೋವಿಡ್-19 ದುಷ್ಪರಿಣಾಮದಿಂದ ಬಹುಸಂಖ್ಯೆಯ ಕಾರ್ಮಿಕರು ಕೆಲಸ ಕಳೆದುಕೊಂಡಿರುತ್ತಾರೆ. ಪ್ರವಾಸಿ ವೀಸಾದಲ್ಲಿ ಬಂದು ವೀಸಾ ಅವಧಿ ಮುಗಿದವರು, ಹಿರಿಯ ನಾಗರೀಕರು, ಮಹಿಳೆಯರು, ಗರ್ಭಿಣಿಯರು ಸಂಬಳರಹಿತ ರಜೆಯಲ್ಲಿರುವ ಕಾರ್ಮಿಕರು ಊಟ ವಸತಿಗೆ ಪರದಾಡುತ್ತಿದ್ದು, ದುಬಾರಿ ವೈದ್ಯಕೀಯ ವೆಚ್ಚ ಅನಿವಾಸಿ ಕನ್ನಡಿಗರಲ್ಲಿ ಭಯ ಮತ್ತು ಆತಂಕ ಆತಂಕವನ್ನು ಹೆಚ್ಚು ಮಾಡಿದೆ. ಪ್ರಯಾಣ ನಿರ್ಭಂಧ ಜಾರಿಯಲ್ಲಿರುವುದರಿಂದ ತಮ್ಮ ಪೋಷಕರನ್ನು ಕರೆಸಿಕೊಂಡಿರುವವರಲ್ಲಿ ಹಲವರ ವೀಸಾ ಅವಧಿ ಮುಗಿದಿದೆ. ಆದ್ದರಿಂದ ವೀಸಾ ಅವಧಿಯನ್ನು ಲಾಕ್‌ಡೌನ್ ಅಂತ್ಯಗೊಳ್ಳುವವರೆಗೆ ಹಾಗೂ ಭಾರತೀಯ ವಿದೇಶಾಂಗ ಮಂತ್ರಾಲಯ ಅಂತರರಾಷ್ಟ್ರೀಯ ಸಂಚಾರವನ್ನು ಮುಕ್ತಗೊಳಿಸುವವರೆಗೆ ವಿಸ್ತರಿಸಲು ಸಂಬಂಧಪಟ್ಟ ದೇಶಗಳನ್ನು ಕೋರುವಂತೆ ಹಾಗೂ ಸ್ವದೇಶಕ್ಕೆ ಮರಳಲು ಅನಿವಾಸಿ ಕನ್ನಡಿಗರಿಗೆ ಕಡಿಮೆದರದಲ್ಲಿ ಪ್ರಯಾಣ ವೆಚ್ಚ ನಿಗಧಿಗೊಳಿಸುವಂತೆ ಕೋರಿರುತ್ತಾರೆ.

2. ಯುರೋಪಿಯನ್ ಒಕ್ಕೂಟ, ಆಸ್ಟ್ರೇಲಿಯಾ, ಆಫ್ರಿಕಾ, ಇಂಗ್ಲೆಂಡ್ ದೇಶಗಳಲ್ಲಿ ನೆಲೆಸಿರುವ ಅನಿವಾಸಿ ಕನ್ನಡಿಗರು ಕೋವಿಡ್-19ರಿಂದ ಸಂಕಷ್ಟಕ್ಕೀಡಾಗಿದ್ದು, ಬಹಳಷ್ಟು ಜನರು ಕೆಲಸ ಕಳೆದುಕೊಳ್ಳುವ ಆತಂಕದಲ್ಲಿದ್ದಾರೆ ಉದ್ಯೋಗದಲ್ಲಿರುವ ತಮ್ಮ ಮಕ್ಕಳ ಮನೆಗೆ ತೆರಳಿರುವ ಪೋಷಕರು, ಉನ್ನತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು, ಹಿರಿಯ ನಾಗರೀಕರು ಸ್ವದೇಶಕ್ಕೆ ಮರಳುವ ದಾವಂತದಲ್ಲಿದ್ದು, ತಮ್ಮ ಮಕ್ಕಳಿಗೆ ಕರ್ನಾಟಕದಲ್ಲಿಯೇ ವ್ಯಾಸಂಗ ಮುಂದುವರಿಸಲು ಹಾಗೂ ಅಲ್ಲಿರುವ ಶೈಕ್ಷಣಿಕ ವ್ಯವಸ್ಥೆಯನ್ನು ಕರ್ನಾಟಕದಲ್ಲಿ ವ್ಯವಸ್ಥೆಗೊಳಿಸಲು ಕೋರಿರುತ್ತಾರೆ.
3. ಧಾರವಾಡ ಜಿಲ್ಲೆಯ ಶಿವರಾಜ್ ಪಾಟೀಲ್‌ರವರು ಲಂಡನಲ್ಲಿಯೇ ಮರಣ ಹೊಂದಿದ್ದು, ಅವರ ಕುಟುಂಬ ಸದಸ್ಯರು ಶವಸಂಸ್ಕಾರಕ್ಕೆ ಮೃತದೇಹವನ್ನು ಭಾರತಕ್ಕೆತರಲು ಪ್ರಯತ್ನಿಸುತ್ತಿದ್ದಾರೆ. ಅವರ ಪತ್ನಿ ಶಿವಲೀಲಾ ಪಾಟೀಲ್ ಮಗ ಶಿವಾಂಗ್ ರವರು ವಿಮಾನಯಾನದ ಸಮಸ್ಯೆಯಿಂದಾಗಿ ಮೃತದೇಹವು ಶವಾಗಾರದಲ್ಲಿದ್ದು, ಸ್ವದೇಶಕ್ಕೆ ತರಲು ವಿಮಾನಯಾನ ಸೌಲಭ್ಯಕಲ್ಪಿಸುವಂತೆಕೋರಿರುತ್ತಾರೆ.
4. ಆಸ್ಟ್ರೇಲಿಯಾದ ಸಿಡ್ನಿಯಲ್ಲಿನ ವಿದ್ಯಾರ್ಥಿಗಳು ತೊಂದರೆಗೊಳಗಾಗಿರುವ ಬಗ್ಗೆ ಸತೀಶ್ ಎಂಬುವವರು ಮಾತನಾಡಿ ಉನ್ನತ ವ್ಯಾಸಂಗಕ್ಕಾಗಿ ತೆರಳಿದ್ದ ವಿದ್ಯಾರ್ಥಿಗಳ ವೀಸಾ ಅವಧಿ ಮುಗಿದಿದ್ದು ಇವರು ಮತ್ತೆ ಹೊಸದಾಗಿ ವೀಸಾ ಮಾಡಿಸುವಂತೆ ಅಲ್ಲಿನ ಸರ್ಕಾರ ಸೂಚಿಸಿದೆ. ಹೊಸದಾಗಿ ವೀಸಾ ಮಾಡಿಸುವುದು ವಿದ್ಯಾರ್ಥಿಗಳಿಗೆ ದುಬಾರಿ ವೆಚ್ಚವಾಗುತ್ತದೆ ಇದರಿಂದ ವಿದ್ಯಾಥಿಗಳು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಈ ಹಿಂದೆ ಪಾರ್ಟ್‌ಟೈಮ್ ಕೆಲಸ ನಿರ್ವಹಿಸಿ ಜೀವನ ನಿರ್ವಹಿಸುತ್ತಿದ್ದು ಸದ್ಯ ಸಂಕಷ್ಟಕ್ಕೆ ಸಿಲುಕಿದ್ದಾರೆ. ಆದ್ದರಿಂದ ಈಗ ಪಡೆದಿರುವ ವೀಸಾವನ್ನೇ ಶೈಕ್ಷಣಿಕ ಅವಧಿ ಮುಗಿಯುವವರೆಗೆ ವಿಸ್ತರಿಸುವಂತೆ ಅಲ್ಲಿನ ಸರ್ಕಾರಕ್ಕೆ ಒತ್ತಾಯಿಸುವಂತೆ ಕೋರಿರುತ್ತಾರೆ.
5. ಗಲ್ಫ್ ರಾಷ್ಟ್ರಗಳಲ್ಲಿ ನೆಲೆಸಿರುವ ಅನಿವಾಸಿ ಕನ್ನಡಿಗರು ಸ್ವದೇಶಕ್ಕೆ ಮರಳಲು ಸಾಧ್ಯವಾಗುವಂತೆ ಭಾರತೀಯ ರಾಯಭಾರಿ ಕಛೇರಿಗಳಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳುತ್ತಿದ್ದಾರೆ. ಆದರೆ ಕಡಿಮೆ ಸಂಖ್ಯೆಯ ಅನಿವಾಸಿ ಕನ್ನಡಿಗರು ನೆಲೆಸಿರುವ ಯುರೋಪಿಯನ್ ದೇಶಗಳಾದ ಇಟಲಿ, ಫ್ರಾನ್ಸ್, ಜರ್ಮನಿ, ಐರ್ಲೆಂಡ್ ಮುಂತಾದ ದೇಶಗಳ ಹಾಗೂ ಆಫ್ರಿಕಾ ದೇಶದ ಕೀನ್ಯಾ, ಉಗಾಂಡಾ, ಥಾಂರ್ಝೇನಿಯಾ, ಜಾಂಬಿಯಾ ದೇಶಗಳ ಜನರು ರಾಯಭಾರಿ ಕಛೇರಿಗಳಲ್ಲಿ ಹೆಸರು ನೋಂದಾಯಿಸಿಕೊಳ್ಳಲು ಪ್ರಾರಂಭವಾಗಬೇಕಾಗಿದೆ. ಆದುದರಿಂದ ಸಮಬಂಧಪಟ್ಟ ರಾಯಭಾರಿ ಕಛೇರಿಗಳಿಗೆ ಸ್ವದೇಶಕ್ಕೆ ಮರಳುವವರ ನೋಂದಣಿ ಪ್ರಾರಂಭಿಸುವಂತೆ ಮನವಿ ಮಾಡಿರುತ್ತಾರೆ. ಸದರಿಯವರಿಗೆ ಈಗಾಗಲೇ ರಾಜ್ಯ ಸರ್ಕಾರ ಕೋವಿಡ್-19 ಸಂಬಂಧ ಪ್ರತ್ಯೇಕ ಜಾಲತಾಣ'ಸೇವಾಸಿಂಧು' ಪ್ರಾರಂಭಿಸಿದ್ದು, ಅದರಲ್ಲಿ ಹೆಸರು ನೋಂದಾಯಿಸಲು ತಿಳಿಸಲಾಗಿದೆ.

ಕರ್ನಾಟಕ ಸರ್ಕಾರವು ತುರ್ತಾಗಿ ಕೈಗೊಳ್ಳಬೇಕಾಗಿರುವ ಕ್ರಮಗಳು ಈ ಕೆಳಂಡಂತೆ ಪ್ರಸ್ತಾಪಿಸಲ್ಪಟ್ಟಿರುತ್ತವೆ.

1. ವಿಶ್ವದಾದ್ಯಂತ ನೆಲೆಸಿರುವ ಸಂಕಷ್ಟದಲ್ಲಿರುವ ಅನಿವಾಸಿ ಕನ್ನಡಿಗರಿಗೆ ಅಗತ್ಯ ಮಾಹಿತಿ ನೀಡಲು ಹಾಗೂ ಅವರನ್ನು ಸಮನ್ವಯ ಸಾಧಿಸುವದೃಷ್ಟಿಯಿಂದ ಈಗಾಗಲೇ ತಮಿಳುನಾಡು ಹಾಗೂ ಕೇರಳ ಸರ್ಕಾರ ಸ್ಥಾಪಿಸಿರುವಂತೆ ರಾಜ್ಯ ಸರ್ಕಾರದ 24*7 ಸಹಾಯವಾಣಿಯನ್ನು ತ್ವರಿತವಾಗಿ ತೆರೆಯುವ ಅಗತ್ಯವಿರುತ್ತದೆ.

2. ಉನ್ನತ ವ್ಯಾಸಂಗಕ್ಕೆ ತೆರಳಿ ಕೊರೊನಾ ಸಂಕಷ್ಟಕ್ಕೆ ಸಿಲುಕಿರುವ ವಿದ್ಯಾರ್ಥಿಗಳ ವೀಸಾ ಅವಧಿಯನ್ನು ಶೈಕ್ಷಣಿಕ ಅವಧಿ ಮುಗಿಯುವವರೆಗೆ ವಿಸ್ತರಿಸುವಂತೆ ಸಂಬಂಧಪಟ್ಟ ದೇಶಗಳನ್ನು ಉನ್ನತ ಮಟ್ಟದಲ್ಲಿ ಕೋರಬೇಕಿದೆ.
3. ಕನ್ನಡಿಗರು ಕಡಿಮೆ ಸಂಖ್ಯೆಯಲ್ಲಿ ನೆಲೆಸಿರುವ ಯುರೋಪ್ ಮತ್ತು ಆಫ್ರಿಕಾದೇಶದಲ್ಲಿನ ಅನಿವಾಸಿ ಕನ್ನಡಿಗರು ಭಾರತೀಯ ರಾಯಭಾರಿ ಕಛೇರಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಲು ವ್ಯವಸ್ಥೆ ಮಾಡುವಂತೆ ಸಂಬಂಧಪಟ್ಟ ರಾಯಭಾರಿ ಕಛೇರಿಗಳನ್ನು ಕೋರುವುದು.
4. ಅನಿವಾಸಿ ಕನ್ನಡಿಗರು ಸ್ವದೇಶಕ್ಕೆ ಮರಳಿದ ನಂತರ ಅವರ ಮಕ್ಕಳ ಶಾಲಾ ಪ್ರವೇಶಕ್ಕೆ ಅಗತ್ಯ ವ್ಯವಸ್ಥೆ ಕಲ್ಪಿಸುವುದು..
5. ವಿದೇಶಗಳಲ್ಲಿ ಉದ್ಯೋಗ ಕಳೆದುಕೊಂಡು ಭಾರತಕ್ಕೆ ಹಿಂದಿರುಗುವವರಿಗೆ ವೃತ್ತಿಪರಕೌಶಲ್ಯ ತರಬೇತಿ ನೀಡಿ ಅವರ ಶೈಕ್ಷಣಿಕ ಅರ್ಹತೆಯಾನುಸಾರ ಸ್ಥಳೀಯವಾಗಿ ಕೆಲಸ ನಿರ್ವಹಿಸಲು ವ್ಯವಸ್ಥೆ ಮಾಡಬೇಕಿದೆ.
6. ಕರ್ನಾಟಕ ಅನಿವಾಸಿ ಭಾರತೀಯ ಸಮಿತಿಯನ್ನು ಇದೇ ಉದ್ದೇಶಕ್ಕೆ ಪ್ರಾರಂಭಿಸಿದ್ದು, ಅನಿವಾಸಿ ಕನ್ನಡಿಗರೊಂದಿಗೆ ಸಮನ್ವಯ ಸಾಧಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡುವುದು
7. ಅನಿವಾಸಿ ಕನ್ನಡಿಗರಿಗೆ ಆರೋಗ್ಯ ರಕ್ಷಣೆ ದೃಷ್ಟಿಯಿಂದ ಅವರು ಹಿಂತಿರುಗಿದ ನಂತರ ನಿಯಾಮನುಸಾರ ಕ್ವಾರಂಟೈನ್ ವ್ಯವಸ್ಥೆಗಳನ್ನು ಕಲ್ಪಿಸುವುದು. ಸದರಿ ಮಾಹಿತಿಯನ್ನು ಅನಿವಾಸಿ ಕನ್ನಡಿಗರಿಗೆ ತಲುಪಿಸುವುದು.
8. ಕೆಲವು ನಿರ್ಧಿಷ್ಟ ಕೆಲಸಗಳಾದ ಧಾರವಾಡದ ಶಿವರಾಜ್ ಪಾಟೀಲ್‌ರವರ ಮೃತದೇಹವನ್ನು ಸ್ವದೇಶಕ್ಕೆ ತರುವುದು ಹಾಗೂ ಆಸ್ಟ್ರೇಲಿಯಾದ ಸಿಡ್ನಿಯಲ್ಲಿ ಉನ್ನತ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ವೀಸಾ ಅವಧಿಯನ್ನು ವಿಸ್ತರಿಸುವಲ್ಲಿ ಉಂಟಾಗಿರುವ ಸಮಸ್ಯೆಯನ್ನು ಆದ್ಯತೆಯ ಮೇಲೆ ಬಗೆಹರಿಸಲು ಭಾರತೀಯ ರಾಯಭಾರಿ ಕಛೇರಿ ಹಾಗೂ ಕೇಂದ್ರ ಸರ್ಕಾರದೊಡನೆ ಸಂಪರ್ಕಿಸಬೇಕಾಗಿರುತ್ತದೆ.

ಸಾಗರೋತ್ತರ ದೇಶಗಳಲ್ಲಿ ನೆಲೆಸಿ ಬದುಕನ್ನು ರೂಪಿಸಿಕೊಂಡಿರುವ ಅನಿವಾಸಿ ಕನ್ನಡಿಗರು ಕನ್ನಡ ಸಂಸ್ಕೃತಿಯ ರಾಯಭಾರಿಗಳಾಗಿ, ದೇಶದ ಆರ್ಥಿಕ ಅಭಿವೃದ್ಧಿಗೆ ನೆರವಾಗಿದ್ದು ಇವರು ಕೊರೊನಾ ಸಂಕಷ್ಟಕ್ಕೆ ಸಿಲುಕಿರುವುದರಿಂದ ಇವರ ಭಾವನೆಗಳಿಗೆ ಸ್ಪಂದಿಸುವುದರ ಮೂಲಕ ಆತ್ಮವಿಶ್ವಾಸ ಮೂಡಿಸುವುದರೊಂದಿಗೆ ಸಂಕಷ್ಟದ ಸಂದರ್ಭದಲ್ಲಿ ಸರ್ಕಾರ ನಿಮ್ಮೊಡನಿದೆ ಎಂಬ ಆತ್ಮಸ್ಥೈರ್ಯವನ್ನು ಕರ್ನಾಟಕ ಸರ್ಕಾರದ ಪರವಾಗಿ ತುಂಬುವ ಕೆಲಸವನ್ನು ಮಾಡಿದ್ದು, ಸಮಸ್ಯೆಗಳ ಬಗ್ಗೆ ಮುಖ್ಯ ಮಂತ್ರಿಯವರಿಗೆ ಮನವಿ ಸಲ್ಲಿಸಿ ಅನಿವಾಸಿ ಕನ್ನಡಿಗರಿಗೆ ವಿಶ್ವಾಸ ತುಂಬುವ ಕೆಲಸವನ್ನು ಸರ್ಕಾರದಿಂದ ಕೈಗೊಳ್ಳಲು ಕೋರಿ, ಅನಿವಾಸಿ ಕನ್ನಡಿಗರ ಸಂಕಷ್ಟಕ್ಕೆ ತುರ್ತಾಗಿ ಸ್ಪಂದಿಸುವಂತೆ ಕೇಂದ್ರ ಸರ್ಕಾರಕ್ಕೆ ಸಹ ಮನವಿ ಸಲ್ಲಿಸಲಾಗಿದೆ

## ಸಚಿವರ ಪ್ರವಾಸ

ಬೆಂಗಳೂರು, ಮೇ 6 ( ಕರ್ನಾಟಕ ವಾರ್ತೆ ) :

ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವ ಕೆ. ಗೋಪಾಲಯ್ಯ ಅವರು ಮೇ 7 ರಂದು ಕೋಲಾರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಸಂಜೆ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.

## ಅವಧಿ ವಿಸ್ತರಣೆ

ಬೆಂಗಳೂರು, ಮೇ 6 ( ಕರ್ನಾಟಕ ವಾರ್ತೆ ) :

ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ 2019 ನೇ ಸಾಲಿನ ಯುವಬರಹಗಾರರ ಚೊಚ್ಚಲ ಕೃತಿಗಳನ್ನು ಪ್ರಕಟಿಸಲು ಪ್ರೋತ್ಸಾಹಧನ ನೀಡುವ ಸಲುವಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಕೋವಿಡ್–19 ರ ಹಿನ್ನೆಲೆಯಲ್ಲಿ ಅರ್ಜಿ ಸಲ್ಲಿಸಲು ಮೇ 30 ರವರೆಗೆ ಅವಧಿ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ, ಮೊದಲನೆ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು–ದೂರವಾಣಿ 080–22484516 / 22017704 ನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.